ಸಾಕ್ಷಿಯನ್ನು ದಿಃ 30.07.2025 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,
ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,
ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,
ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು,
ಕಲಂ 133 ರಡಿಯ ನೋಟೀಸನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು,
ನೋಟೀಸಿಗೆ ನೀಡಿರುವ ಉತ್ತರವನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು,
ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು,
ಎರಡು ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಮತ್ತು 9 ಎಂದು,
ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 10 ಎಂದು,
ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು, ನಿಪಿ. 11 ಎಂದು,
45 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 12 ಎಂದು,
03 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 13 ಎಂದು,
3 ಎಕ್ಸ್ ರೇ ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 14 ಎಂದು,

ಅರ್ಜಿದಾರರ ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 15 ಮತ್ತು 16 ಎಂದು, ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

(ನಿಪಿ. 15 ಮತ್ತು 16 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.